ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 18/3/2020

# ಉಪಸಭಾಧ್ಯಕ್ಷ ಸ್ಥಾನಕ್ಕೆ ಕೃಷ್ಣಾರೆಡ್ಡಿ ರಾಜೀನಾಮೆ

ವಿಧಾನಸಭೆ: ವಿಧಾನಸಭೆ ಉಪಸಭಾಧ್ಯಕ್ಷ ಸ್ಥಾನಕ್ಕೆ ಜೆಡಿಎಸ್‌ನ ಜೆ.ಕೆ. ಕೃಷ್ಣಾರೆಡ್ಡಿ ರಾಜೀನಾಮೆ ನೀಡಿದ್ದಾರೆ. ಈ ಬಗ್ಗೆ ಸ್ವತಃ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರೇ ಮಂಗಳವಾರ ಸದನಕ್ಕೆ ತಿಳಿಸಿದರು. ನಿಯಮ 169ರ ಮೇರೆಗೆ ಉಪಸಭಾಧ್ಯಕ್ಷ ಕೃಷ್ಣಾರೆಡ್ಡಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆಗೆ ಬಿಜೆಪಿ ಸಜ್ಜಾಗಿತ್ತು. ಆ ಹಿನ್ನೆಲೆಯಲ್ಲಿ ವಿಧಾನಸಭಾಧ್ಯಕ್ಷರನ್ನು ಭೇಟಿಯಾದ ಕೃಷ್ಣಾರೆಡ್ಡಿ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಹಿಂದಿನ ಕಾಂಗ್ರೆಸ್ -ಜೆಡಿಎಸ್ ಮೈತ್ರಿ ಸರ್ಕಾರದ ಅವಧಿಯಲ್ಲಿ ಕೃಷ್ಣಾರೆಡ್ಡಿ ಅವರನ್ನು ಉಪಸಭಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿತ್ತು.



ಮಂಗಳವಾರ ಕಲಾಪದಲ್ಲಿ ಈ ವಿಷಯ ಪ್ರಸ್ತಾಪಿಸಿದ ವಿಧಾನಸಭಾಧ್ಯಕ್ಷರು, ಉಪ ಸಭಾಧ್ಯಕ್ಷ ಸ್ಥಾನಕ್ಕೆ ಕೃಷ್ಣಾರೆಡ್ಡಿ ಅವರ ರಾಜೀನಾಮೆಯಿಂದಾಗಿ ಅವಿಶ್ವಾಸ ನಿರ್ಣಯ ಮಂಡನೆ ಪ್ರಸ್ತಾಪವನ್ನು ಕೈಬಿಡಲಾಗಿದೆ ಎಂದರು. ಸದ್ಯದಲ್ಲೇ ಉಪ ಸಭಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ಘೋಷಣೆಯಾಗಲಿದೆ. ಸವದತ್ತಿ ಕ್ಷೇತ್ರದ ಶಾಸಕ ಆನಂದ ಮಾಮನಿ ಅವರು ಉಪ ಸಭಾಧ್ಯಕ್ಷ ಸ್ಥಾನದ ಆಕಾಂಕ್ಷಿಯಾಗಿದ್ದಾರೆ. ಈ ಸಂಬಂಧ ಕೆಲ ಶಾಸಕರೊಂದಿಗೆ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಮಂಗಳವಾರ ಭೇಟಿಯಾಗಿ ಮನವಿ ಮಾಡಿದ್ದಾರೆ ಎನ್ನಲಾಗಿದೆ.